**ಸಾಕ್ಷಿಯನ್ನು ದಿಃ 18.02.2026 ರಂದು ಕರೆಯಿಸಿ ಪ್ರಮಾಣ ವಚನ ಬೋದಿಸಲಾಯಿತು.**

**ಪಾಟೀ ಸವಾಲುಃ ಎದುರುದಾರರ ಪರ ವಕೀಲರಿಂದಃ**

ನಾನು ಆ ದಿನ ನಮ್ಮೂರಿಗೆ ಹೋಗುತ್ತಿದ್ದೆ. ನಾನು ಈಗ ವ್ಯವಸಾಯ ಮಾಡುತ್ತೇನೆ. ಈಗ ಎರಡು ತಿಂಗಳ ಹಿಂದೆ ಕ್ಯಾನ್ಸರ್ ಇರುವುದು ನನಗೆ ತಿಳಿದಿದೆ. ಯಾವ ಹಂತದಲ್ಲಿದೆ ಎಂದು ಗೊತ್ತಿಲ್ಲ. ನನಗೆ ಮೊದಲಿನಂದಲೂ ಆರೋಗ್ಯ ಸಮಸ್ಯೆ ಇದ್ದು ಯಾವುದೇ ಕೆಲಸ ಮಾಡುತ್ತಿರಲಿಲ್ಲ ಎಂದರೆ ಸರಿಯಲ್ಲ. ಆ ದಿನ ಬೈಕ್ ನಲ್ಲಿ ಸರಿಯಾಗಿ ಕುಳಿತುಕೊಳ್ಳದೇ ನನ್ನ ಅಜಾಗರೂಕತೆಯಿಂದ ಅಪಘಾತ ಆಗಿದೆ ಎಂದರೆ ಸರಿಯಲ್ಲ. ನಮ್ಮ ಅಜಾಗರೂಕತೆಯಿಂದ ಅಪಘಾತ ಆಗಿದೆ ಎಂದರೆ ಸರಿಯಲ್ಲ.

2. ಔಷಧಿ ಬಿಲ್ಲುಗಳನ್ನು ನಾನು ಸೃಷ್ಠಿಸಿ ಹಾಜರು ಪಡಿಸಿದ್ದೇನೆ ಎಂದರೆ ಸರಿಯಲ್ಲ. ಔಷಧಿ ಬಿಲ್ಲುಗಳಲ್ಲಿ ನನಗೆ ಯಾವುದೇ ತೊಂದರೆ ಇಲ್ಲ ಎಂದು ನಮೂದಿಸಿದ್ದಾರೆ ಎಂದರೆ ಸರಿಯಲ್ಲ. ನಾನು ಮುಂದುವರೆದ ಚಿಕಿತ್ಸೆ ಪಡೆಯದೇ ಇದ್ದರೂ ಸಹ ಪರಿಹಾರಕ್ಕಾಗಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾಖಲೆಗಳನ್ನು ಸೃಷ್ಠಿಸಿ ಹಾಜರು ಪಡಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತದಲ್ಲಿ ಎದುರುದಾರರ ತಪ್ಪಿಲ್ಲ ಎಂದರೆ ಸರಿಯಲ್ಲ. ನಾವಾಗಿಯೇ ಬಿದ್ದು ಪೆಟ್ಟು ಮಾಡಿಕೊಂಡಿರುವ ಕಾರಣ ಎದುರುದಾರರು ಪರಿಹಾರ ನೀಡಲು ಭಾಧ್ಯರಲ್ಲ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು

ಮತ್ತು ಎಂ.ಎ.ಸಿ.ಟಿ., ಮೈಸೂರು.